**3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು**
**<u>ಸಿ.ಸಿ.ನಂ. 4060/2024</u>**

ದಿನಾಂಕಃ **13.10.2025** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು | ಯೋಗೀಶ್ | ಚಾಸಾ-6, ಪ್ರಾಸ-3 |
| ತಂದೆಯ ಹೆಸರು | ರಾಮಜ್ಜ | |
| ವಯಸ್ಸು | 43 ವರ್ಷ | |
| ಉದ್ಯೋಗ | ಕೂಲಿ | |
| ವಾಸ | ಯಳವರಹಟ್ಟಿ | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>

ಚಾಸಾ-7 ನನಗೆ ಗೊತ್ತು. ಆರೋಪಿ ನನಗೆ ಗೊತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನನಗೆ ಯಾವುದೇ ಮಾಹಿತಿ ಇಲ್ಲಾ. ನನ್ನ ಸಮಕ್ಷಮ ಪೋಲಿಸರು ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಮತ್ತು ಯಾವುದೇ ವಸ್ತುವನ್ನು ವಶಪಡಿಸಿಕೊಂಡಿರುವುದಿಲ್ಲ. ಈ ಸಂಬಂಧ ನಾನು ಯಾವುದೇ ಹೇಳಿಕೆ ನೀಡಿರುವುದಿಲ್ಲ. ದಿಃ 23.06.2024 ರ ಪೋಲಿಸ್ ನೋಟಿಸಿನಲ್ಲಿ ತನ್ನ ಸಹಿ ನೋಡಿ ಗುರುಸಿತಿರುತ್ತಾರೆ. ಸದರಿ ನೋಟಿಸನ್ನು ನಿಪಿ-3 ರಲ್ಲಿರುವ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರ ಮಹಜರ್ ನಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಯಾವಾಗ ಮತ್ತು ಎಲ್ಲಿ ಹಾಕಿರುತ್ತೇನೆ ಎಂದು ಗೊತ್ತಿಲ್ಲ. ನನ್ನೊಂದಿಗೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ತಿಳಿದಿಲ್ಲ. ಸಾಕ್ಷಿಗೆ ಮಹಜರ್ ಸಮಯದಲ್ಲಿ ತೆಗೆಯಲಾದ ನಿಪಿ-2 ರ ಛಾಯಾಚಿತ್ರವನ್ನು ತೋರಿಸಲಾಗಿ ಅದರಲ್ಲಿ ತನ್ನ ಇರುವಿಕೆಯನ್ನು ಗುರುತಿಸಿರುತ್ತಾರೆ. ಸಾಕ್ಷಿಗೆ ನ್ಯಾಯಾಲಯದ ಮುಂದಿರುವ ಬಿಳಿ ಬಣ್ಣದ ಚೀಲವನ್ನು ತೋರಿಸಲಾಗಿ ಅದಕ್ಕೆ ಅಂಟಿಸಿರುವ ಚೀಟಿಯಲ್ಲಿರುವ ತನ್ನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಚೀಲವನ್ನು ಮುಮಾ-1 ಎಂದು, ಸಾಕ್ಷಿ ಸಹಿಯನ್ನು ಮುಮಾ-1(ಎ) ಎಂದು ಗುರುತಿಸಲಾಯಿತು. ಅದನ್ನು ಎಲ್ಲಿಂದ ಮತ್ತು ಯಾವಾಗ ವಶಪಡಿಸಿಕೊಳ್ಳಲಾಯಿತು ಎಂದು ನನಗೆ ಗೊತ್ತಿಲ್ಲ. ನಿಪಿ-1 ಮತ್ತು 3 ಕ್ಕೆ ನನ್ನ ಜೊತೆ ಬೇರೆ ಯಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಈ ಸಂಬಂಧ ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

<u>ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ</u>

ದಿಃ 23.06.2024 ರಂದು ನನಗೆ ಮತ್ತು ಚಾಸಾ-7 ರವರಿಗೆ ಪೋಲಿಸರು ನಿಪಿ-3 ರಂತೆ ನೋಟಿಸು ಜಾರಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ನೋಟಿಸಿಗೆ ನಾವು ಸಹಿ ಮಾಡಿ ಪೋಲಿಸರೊಂದಿಗೆ ಹೊರಟು ಸಂಜೆ 7.00 ಗಂಟೆಗೆ ಯಳವರಹಟ್ಟಿ ಗ್ರಾಮದ ಆರೋಪಿಯ ಅಡಿಕೆ ತೋಟದ ಸಮೀನಿ ಜೀಪನ್ನು ನಿಲ್ಲಿಸಿ ನೋಡಿದಾಗ ಆರೋಪಿ ಒಂದು ಪ್ಲಾಸ್ಟಿಕ್ ಚೀಲವನ್ನು ಹಿಡಿದುಕೊಂಡು ನಿಂತಿದ್ದು ಜೀಪನ್ನು ನೋಡಿ ಓಡಿ ಹೋಗಲು ಪ್ರಯತ್ನಪಟ್ಟಿರುತ್ತಾನೆ ಎಂದರೆ ಸರಿಯಲ್ಲ. ಪೋಲಿಸರು ಆತನನ್ನು ಸುತ್ತುವರೆದು ಹಿಡಿದು ಆತನ ಬಳಿ ಇದ್ದ ಪ್ಲಾಸ್ಟಿಕ್ ಚೀಲವನ್ನು ಪರಿಶೀಲಿಸಿ ನೋಡಿದಾಗ 90 ಎಂಎಲ್ ನ 111 ರಾಜಾವಿಸ್ಕಿ ಪೌಚುಗಳು ಇದ್ದವು ಎಂದರೆ ಸರಿಯಲ್ಲ. ಅವುಗಳ ಒಟ್ಟು ಮೌಲ್ಯ ರೂ. 4,329 ಆಗಿರುತ್ತದೆ ಎಂದರೆ ಸರಿಯಲ್ಲ. ನಂತರ ಪೋಲಿಸರು ಸಂಜೆ 7.10 ರಿಂದ 8.10 ರವರೆಗೆ ನಿಪಿ-1 ರ ಮಹಜರ್ ಕ್ರಮ ಜರುಗಿಸಿ ಮದ್ಯವನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಈ ಸಂಬಂಧ ನಾನು ದಿಃ 05.07.2024 ರಂದು ಈಗ ಓದಿ ಹೇಳಿದಂತೆ ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು.

<u>ಪಾಟೀಸವಾಲುಃ ಆರೋಪಿ ಪರ ವಕೀಲರಿಂದ ಃಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದ:ನ್ಯಾ:ದಂ.,ರವರು, ಕಡೂರು.